**ಕರ್ನಾಟಕ ಸರಕಾರ, ಸಾರ್ವಜನಿಕ ಶಿಕ್ಷಣ ಇಲಾಖೆಯ, ಅಪರ ಆಯುಕ್ತರ ಕಛೇರಿ,**

ಐವಾನ್–ಎ–ಶಾಹಿ ಬಡಾವಣೆ ಗುಲಬರ್ಗಾ

ಸಂಖ್ಯೆ : ಸಿ4(4) ಖಾಪ್ರೌಶಾ ಹೊಪ್ರೌಶಾ ಅನು 67/2011–12 ದಿನಾಂಕ : 11ನೇ ಮೇ 2012

**ನಮೂನೆ–2**

**ನಿಯಮ 3 ಉಪನಿಯಮ 5(ಬಿ)**

**ಪ್ರಮಾಣ ಪತ್ರ ಸಂಖ್ಯೆ 26/2012–2013**

ಬೀದರ ಬಸವತತ್ವ ಎಜುಕೇಶನ ಟ್ರಸ್ಟ (ರಿ) ವಿದ್ಯಾ ನಗರ ಬೀದರ ಇವರ ಗವರ್ನಿಂಗ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್ 1–1995 ಸೆಕ್ಷನ 31) ರಂತೆ ಇಂದು ದಿನಾಂಕ 11/05/2012 ರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನಡೆಸಲು ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 1 | ಕ್ರಮ ಸಂಖ್ಯೆ | **26/2012–13** |
| 2 | ಶಿಕ್ಷಣ ಸಂಸ್ಥೆಯ ವಿವರ | **ಬೀದರ ಬಸವತತ್ವ ಎಜುಕೇಶನ ಟ್ರಸ್ಟ (ರಿ) ವಿದ್ಯಾ ನಗರ ಬೀದರ** |
| 3 | ಅನುಮತಿ ನೀಡಿದ ಪ್ರೌಢ ಶಾಲೆಯ ಹೆಸರು | **ವಿ.ಕೆ ಇಂಟರ್‌ನ್ಯಾಷನಲ್ ಪ್ರೌಢ ಶಾಲೆ ಆಂಗ್ಲ ಮಾಧ್ಯಮ ವಿದ್ಯಾ ನಗರ ಬೀದರ** |
| 4 | ಅನುಮತಿ ನೀಡಿದ ತರಗತಿ | **8, 9 ಮತ್ತು 10ನೇ ತರಗತಿ** |
| 5 | ಪ್ರಾರಂಭಿಸಬೇಕಾದ ತರಗತಿಗಳು ಹಾಗೂ ಶೈಕ್ಷಣಿಕ ವರ್ಷ | **8 ನೇ ತರಗತಿ 2012–13**<br>**9ನೇ ತರಗತಿ 2013–14**<br>**10ನೇ ತರಗತಿ 2014–15** |
| 6 | ಅನುಮತಿ ನೀಡಿದ ಮಾಧ್ಯಮ | **ಆಂಗ್ಲ ಮಾಧ್ಯಮ** |
| 7 | ಶುಲ್ಕ ಪಾವತಿ ಮಾಡಿರುವದು | **ರೂ. 10,000–00** |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ : 26/2012–13 ಪುಟ ಸಂಖ್ಯೆ 200–201 ವಾಲ್ಯೂಂ ಸಂಖ್ಯೆ 2 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ. ಈ ನೋಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ (ನೊಂದಣಿ) ಅನುಮತಿಯನ್ನು ರದ್ದು ಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

1. ಈ ನೊಂದಣಿಯ ನಿಯಮ 3 (5) (4) ಕ್ಕೆ ಒಳಪಟ್ಟಿರುತ್ತದೆ.
2. ಗರ್ವನಿಂಗ ಕೌನ್ಸಿಲ್ ಇವರು ನಿಯಮ 4(4)ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
3. ಶಾಲಾ ನಿವೇಶನ ವಿಸ್ತೀರ್ಣ ಕಟ್ಟಡ ಪಾಠ ಪೀಠೋಪಕರಣಗಳು ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
4. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
5. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವದಿಲ್ಲ.
6. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿಯೇ ನಡೆಸತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಸಕ್ಷಮ ಪ್ರಾಧಿಕಾರವಾದ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಗುಲಬರ್ಗಾ ಇವರ ಪೂರ್ವಾನುಮತಿ ಇಲ್ಲದೆ ಹಸ್ತಾಂತರಿಸತಕ್ಕದ್ದಲ್ಲ.
7. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು ಕರ್ನಾಟಕ ಶಿಕ್ಷಣ ಮಸೂದೆ 1983 (ಆಕ್ಟ 2ಆಫ್ 1995) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಇದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೆ ಪಾಲಿಸತಕ್ಕದ್ದು.
8. ಈ ಪ್ರೌಢ ಶಾಲಾ ನೊಂದಣಿಯಂತೆ ಸರ್ಕಾರಿ ಅಧಿಸೂಚನೆ ಸಂಖ್ಯೆ ಇಡಿ 175 ಪಿಎಂಸಿ 95 ದಿನಾಂಕ : 7–9–1998 ಮತ್ತು 29–12–1998 ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ ಆಡಳಿತ ಮಂಡಳಿಯು ಸರ

8. ಯಾವುದೇ ಅನುದಾನವನ್ನು ಬಯಸುವದಿಲ್ಲವೆಂದು ರೂ 20.00 ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡಬಹುದು.
9. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮ 1999 ರ ನಿಯಮಗಳನ್ನು ತಪ್ಪದೆ ಪಾಲಿಸತಕ್ಕದ್ದು ಅವುಗಳಿಗೆ ಬದ್ದರಾಗಿರತಕ್ಕದ್ದು.
10. ಇಲಾಖೆ ಹಾಗೂ ಸರ್ಕಾರ ನಿಗದಿ ಪಡಿಸಿದ ಪಠ್ಯ ಪುಸ್ತಕ, ಪರೀಕ್ಷಾ ಕ್ರಮ ಇತ್ಯಾದಿ ತಪ್ಪದೆ ಅಳವಡಿಸತಕ್ಕದ್ದು.
11. ಅನುಮತಿ ಪಡೆದ 2 ತಿಂಗಳೊಳಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಆಕ್ಟ 1 ಆಫ್ 1995) ರ ಪ್ರಕಾರ ಸೆಕ್ಷನ 36 ರಿಂದ 39 ರಿತ್ಯ ಹಾಗೂ ಇಡಿ 131 ವಿವಿಧ 98 ಬೆಂಗಳೂರು ದಿನಾಂಕ : 4-11-99 ರಂತೆ ಮಾನ್ಯತೆ ಹಾಗೂ ಸಕ್ಷಮ ಪ್ರಾಧಿಕಾರಿಗಳಿಗೆ ಮಾನ್ಯತೆಗಾಗಿ ಅರ್ಜಿ ಸಲ್ಲಿಸತಕ್ಕದ್ದು.
12. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲೆಯ ಉಪನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇಡತಕ್ಕದ್ದು.
13. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಪಾಲಿಸತಕ್ಕದ್ದು
14. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.
15. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.
16. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8 ರಡಿಯಲ್ಲಿ ಉಪಬಂಧ 36-39 ರಂತೆ ನೊಂದಾಯಿಸಿದ ಎಲ್ಲಾ ಶಾಲೆಗಳು ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವದು.
17. ಶಾಲಾ ಕೆಲಸದ ವೇಳೆ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.
18. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೊಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಎರಡು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೆ ರದ್ದಾಗುವುದು.
19. ಶಾಲೆಯಲ್ಲಿ ನೇಮಕಗೊಂಡ ಸಿಬ್ಬಂದಿಯವರ ಸೇವಾ ಪುಸ್ತಕ ತೆರೆದು ಅದರಲ್ಲಿ ಅವರ ಸೇವಾ ವಿವರಗಳನ್ನು ನಿಯಮಾನುಸಾರ ಕಡ್ಡಾಯವಾಗಿ ದಾಖಲಿಸಿ ನಿರ್ವಹಿಸುವದು.
20. ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಯಾವುದೇ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡು ಬಂದಲ್ಲಿ ಈ ನೊಂದಣಿಯನ್ನು ರದ್ದುಪಡಿಸಲಾಗುವುದು.
21. ಈ ಶಾಲಾ ಶಿಕ್ಷಕರನ್ನು ಗಣತಿ ಕಾರ್ಯಕ್ಕೆ ನಿಯೋಜಿಸುವುದು.
22. ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ಶೌಚಾಲಯ ಒದಗಿಸುವುದು ಹಾಗೂ ಕುಡಿಯುವ ನೀರಿನ ಸೌಲಭ್ಯ ಇಡುವುದು.
23. ಆಡಳಿತ ಮಂಡಳಿಯು ನೌಕರರಿಗೆ ಸೇವಾ ಭದ್ರತೆ ಒದಗಿಸಿದ ಬಗ್ಗೆ ಖಚಿತಪಡಿಸಿಕೊಂಡ ನಂತರವೇ ಮಾನ್ಯತೆ ನವೀಕರಿಸತಕ್ಕದ್ದು.

(ಎಸ್.ಜಿ ಪಾಲಿ)
ಅಪರ ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ ಗುಲಬರ್ಗಾ

**ಪ್ರತಿಯನ್ನು**

1. ಸರ್ಕಾರದ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ ಬಹುಮಹಡಿಗಳ ಕಟ್ಟಡ ಬೆಂಗಳೂರು
2. ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು ಜಿಲ್ಲಾ ಪಂಚಾಯತ ಬೀದರ
3. ಉಪನಿರ್ದೇಶಕರು ಸಾರ್ವಜನಿಕ ಶಿಕ್ಷಣ ಇಲಾಖೆ ಬೀದರ
4. ಕ್ಷೇತ್ರ ಶಿಕ್ಷಣಾಧಿಕಾರಿಗಳು ಬೀದರ
5. ಕಾರ್ಯದರ್ಶಿಗಳು ಬೀದರ ಬಸವತತ್ವ ಎಜುಕೇಶನ ಟ್ರಸ್ಟ (ರಿ) ವಿದ್ಯಾ ನಗರ ಬೀದರ ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.